# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1599 (1857)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಕಾರ್ಮಿಕ ಸಚಿವರು

ವಿಷಯ : ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯವೈಖರಿ

(ಅ) ಕಾರ್ಮಿಕ ಇಲಾಖೆಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯವೈಖರಿ ಬಗ್ಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರ ಮಾರ್ಚ್ 2019ಕ್ಕೆ ಕೊನೆಗೊಂಡ ವರದಿ ಪ್ರಕಾರ ಕ್ಲೈಮುಗಳ ಸಂಸ್ಕರಣೆಯಲ್ಲಿ ಅತಿಯಾದ ವಿಳಂಬ, ಯೋಜನೆಗಳ ಸಾಧಾರಣ ಪ್ರಚಾರ ಮತ್ತು ಅಸಾಂಗತ್ಯಗಳು ಮತ್ತು ಅವಾಸ್ತವಿಕ ಷರತ್ತುಗಳಿಂದ ನೋಂದಾಯಿತ ಉದ್ಯೋಗದಾತರು ಮತ್ತು ನಿರ್ಮಾಣ ಕಾರ್ಮಿಕರಿಗೆ ಮಂಡಳಿ ಯೋಜನೆಗಳ ಅಡಿಯಲ್ಲಿ ನೀಡಬೇಕಾಗಿರುವ ನೆರವಿನಲ್ಲಿ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ವ್ಯವಸ್ಥೆಯನ್ನು ಸರಿಪಡಿಸಲು ಕೈಗೊಂಡಿರುವು ಕ್ರಮಗಳೇನು ;

(ಆ) ಮಂಡಳಿಯಲ್ಲಿ ಹೆಚ್ಚಿನ ಕೆಲಸವನ್ನು ಹೊರಗುತ್ತಿಗೆ ಸಿಬ್ಬಂದಿಗಳು ನಿರ್ವಹಿಸುತ್ತಿದ್ದು, ಅವರುಗಳು ನಗದು ಶಾಖೆಯಲ್ಲಿ ಚೆಕ್/ಡಿಮ್ಯಾಂಡ್ ಡ್ರಾಫ್ಟ್‌ಗಳನ್ನು ಸಹ ನಿರ್ವಹಿಸುತ್ತಿದ್ದು ಒಂದು ವೇಳೆ ನಗದು ದುರುಪಯೋಗವಾದಲ್ಲಿ ಅಂತಹವರನ್ನು ಜವಾಬ್ದಾರಿಯುತರನ್ನಾಗಿ ಮಾಡುವುದು ಕಷ್ಟ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ?